All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

10.03.2025 1935 P.M.

*******************

ಮುಖ್ಯಾಂಶಗಳು

- ರಾಜ್ಯಸಭೆಯಲ್ಲಿಂದು ರೈಲ್ವೆ ತಿದ್ದುಪಡಿ ವಿಧೇಯಕ-೨೦೨೪ ಮಂಡನೆ
- ಇ-ಶ್ರಮ್ ಪೋರ್ಟಲ್‌ನಲ್ಲಿ ೩೦ ಕೋಟಿ ೬೮ ಲಕ್ಷಕ್ಕೂ ಹೆಚ್ಚು ಅಸಂಘಟಿತ ಕಾರ್ಮಿಕರ ನೋಂದಣಿ
- ೨೦೨೪-೨೫ರಲ್ಲಿ ದೇಶದಲ್ಲಿ ದಾಖಲೆಯ ಅಕ್ಕಿ, ಗೋಧಿ, ಜೋಳ, ನೆಲಗಡಲೆ, ಸೋಯಾಬಿನ್ ಉತ್ಪಾದನೆ
- ಡಬ್ಲ್ಯೂಪಿಎಲ್ ಕ್ರಿಕೆಟ್; ಇಂದು ಮುಂಬೈ ಇಂಡಿಯನ್ಸ್ - ಗುಜರಾತ್ ಜೈಂಟ್ಸ್ ಮುಖಾಮುಖಿ

*******************

ರೈಲ್ವೆ ತಿದ್ದುಪಡಿ ವಿಧೇಯಕ ೨೦೨೪ ಅನ್ನು ರಾಜ್ಯಸಭೆಯಲ್ಲಿ ಇಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮಂಡಿಸಿದರು.

ಈ ವಿಧೇಯಕವು ರೈಲ್ವೆ ಕಾಯ್ದೆ ೧೯೮೯ಕ್ಕೆ ತಿದ್ದುಪಡಿ ತರಲು ಉದ್ದೇಶಿಸಿದೆ ಹಾಗೂ ರೈಲ್ವೆ ಮಂಡಳಿಯ ಅಧಿಕಾರವನ್ನು ಹೆಚ್ಚಿಸಲು ಮತ್ತು ಸಂಸ್ಥೆಯ ನಿರ್ವಹಣೆ, ಸ್ವಾತಂತ್ರ್ಯವನ್ನು ಹೆಚ್ಚಿಸಲು ಉದ್ದೇಶಿಸಿದೆ.

ಈ ವಿಧೇಯಕದ ಮೂಲಕ ಭಾರತೀಯ ರೈಲ್ವೆ ಮಂಡಳಿ ಕಾಯ್ದೆ ೧೯೦೫ರ ಎಲ್ಲಾ ನಿಬಂಧನೆಗಳನ್ನು ರೈಲ್ವೆ ಕಾಯ್ದೆ ೧೯೮೯ ರಲ್ಲಿ ಸೇರಿಸಲು ಪ್ರಸ್ತಾಪಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

ಲೋಕಸಭೆಯು ಈಗಾಗಲೇ ಈ ರೈಲ್ವೆ ತಿದ್ದುಪಡಿ ವಿಧೇಯಕ ೨೦೨೪ಕ್ಕೆ ಅನುಮೋದನೆ ನೀಡಿದೆ.

ಈ ಕುರಿತು ಚರ್ಚೆಯನ್ನು ಪ್ರಾರಂಭಿಸಿದ ಕಾಂಗ್ರೆಸ್‌ನ ವಿವೇಕ್.ಕೆ. ತಂಖಾ, ರೈಲ್ವೆಯ ಬೆಳವಣಿಗೆಗೆ ರೈಲ್ವೆ ಮಂಡಳಿಗೆ ಸಂಪೂರ್ಣ ಸ್ವಾಯತ್ತತೆ ನೀಡುವುದು ಅಗತ್ಯ ಮತ್ತು ರೈಲ್ವೆ ಇಲಾಖೆಯು ಪಾರದರ್ಶಕ ಸಂಸ್ಥೆಯಾಗಬೇಕು. ಹಿರಿಯ ನಾಗರಿಕರು ಮತ್ತು ಪತ್ರಕರ್ತರಿಗೆ ಸಬ್ಸಿಡಿ ನೀಡಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಸಂಸದ ಸುಭಾಷ್ ಬರಾಲಾ ಮಾತನಾಡಿ, ರೈಲ್ವೆ ಆಡಳಿತಾತ್ಮಕ ಕಾರ್ಯ ನಿರ್ವಹಣೆಯನ್ನು ಹೆಚ್ಚು ಸುಗಮ, ಪಾರದರ್ಶಕ ಮತ್ತು ಜವಾಬ್ದಾರಿಯುತವಾಗಿಸುವುದು ಈ ವಿಧೇಯಕದ ಉದ್ದೇಶವಾಗಿದೆ. ರೈಲ್ವೆಯಲ್ಲಿ ಸಮಗ್ರ ಬದಲಾವಣೆಗಳನ್ನು ರೈಲ್ವೆ ಮಂಡಳಿಗೆ ಕಾನೂನು ಬೆಂಬಲವನ್ನು ನೀಡುವುದು ಈ ವಿಧೇಯಕದ ಉದ್ದೇಶವಾಗಿದೆ.

*******************

ಪ್ರಸಕ್ತ ಹಣಕಾಸು ವರ್ಷದಲ್ಲಿ ಹೆಚ್ಚುವರಿ ೫೧ ಸಾವಿರ ೪೬೨ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲು ಕೇಂದ್ರ ಸರ್ಕಾರ ಇಂದು ಸಂಸತ್ತಿನ ಅನುಮೋದನೆಯನ್ನು ಕೋರಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಲೋಕಸಭೆಯಲ್ಲಿ ಎರಡನೇ ಹಂತದ ಅನುದಾನದ ಪೂರಕ ಬೇಡಿಕೆಗಳನ್ನು ಮಂಡಿಸಿದರು.  ಸರ್ಕಾರ ಕೋರಿರುವ ಒಟ್ಟು ಹೆಚ್ಚುವರಿ ವೆಚ್ಚವು ಆರು ಲಕ್ಷ ೭೮ ಸಾವಿರ ೫೦೮ ಕೋಟಿ ರೂಪಾಯಿಗಳಿಗಿಂತ ಹೆಚ್ಚಿದ್ದು, ಅದರಲ್ಲಿ ಆರು ಲಕ್ಷ ೨೭ ಸಾವಿರ ೪೪ ಕೋಟಿ ರೂಪಾಯಿಗಳನ್ನು ಉಳಿತಾಯ ಮತ್ತು ರಶೀದಿಗಳಿಂದ ಹೊಂದಿಸಲಾಗುವುದು.

ಹೆಚ್ಚುವರಿ ವೆಚ್ಚದಲ್ಲಿ ರಸಗೊಬ್ಬರ ಸಬ್ಸಿಡಿಗಾಗಿ ೧೨ ಸಾವಿರ ಕೋಟಿ ರೂಪಾಯಿಗಳು ಮತ್ತು ಏಕೀಕೃತ ಪಿಂಚಣಿ ಯೋಜನೆ ಸೇರಿದಂತೆ ಸರ್ಕಾರಿ ನೌಕರರಿಗೆ ಪಿಂಚಣಿಗಾಗಿ ೧೩ ಸಾವಿರ ೪೪೯ ಕೋಟಿ ರೂಪಾಯಿಗಳು ಸೇರಿವೆ.

ಒಟ್ಟು ವೆಚ್ಚದಲ್ಲಿ ಎಂಟು ಸಾವಿರ ೪೭೬ ಕೋಟಿ ರೂಪಾಯಿಗಳ ರಕ್ಷಣಾ ಪಿಂಚಣಿ ಮತ್ತು ದೂರಸಂಪರ್ಕ ಇಲಾಖೆಗೆ ಐದು ಸಾವಿರ ೩೨೨ ಕೋಟಿ ರೂಪಾಯಿಗಳು ಸೇರಿವೆ. ಸಂಪನ್ಮೂಲ ಅಂತರವನ್ನು ಪೂರೈಸಲು ಕೇಂದ್ರ ಪ್ರದೇಶಗಳಿಗೆ ಕೇಂದ್ರ ನೆರವಿನ ಅಡಿಯಲ್ಲಿ ಹೆಚ್ಚುವರಿ ವೆಚ್ಚವನ್ನು ಪೂರೈಸಲು ಜಮ್ಮು ಮತ್ತು ಕಾಶ್ಮೀರಕ್ಕೆ ಮೂರು ಸಾವಿರ ೭೨೨ ಕೋಟಿ ರೂಪಾಯಿಗಳನ್ನು ಕೋರಲಾಗಿದೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಹೆಚ್ಚುವರಿ ವೆಚ್ಚವನ್ನು ಪೂರೈಸಲು ಒಂದು ಸಾವಿರ ಕೋಟಿ ರೂಪಾಯಿಗಳನ್ನು ಕೋರಲಾಗಿದೆ.

*******************

ಕೇಂದ್ರ ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಸರಕು ಸಾಗಣೆ ವಿಧೇಯಕ-೨೦೨೪ ಅನ್ನು ಲೋಕಸಭೆ ಇಂದು ಮಂಡಿಸಿದರು.  ಬಂದರು ವಲಯಕ್ಕೆ, ವಿಶೇಷವಾಗಿ ವ್ಯಾಪಾರ ಮತ್ತು ವಾಣಿಜ್ಯ ಚಟುವಟಿಕೆಗಳನ್ನು ಹೆಚ್ಚಿಸಲು ಈ ವಿಧೇಯಕ ಬಹಳ ಮುಖ್ಯ ಎಂದು ಅವರು ಹೇಳಿದರು.

ಇದೆ ವೇಳೆ ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ೩೦ ಕೋಟಿ ೬೮ ಲಕ್ಷಕ್ಕೂ ಹೆಚ್ಚು ಅಸಂಘಟಿತ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿಸಲಾಗಿದೆ ಎಂದು ತಿಳಿಸಿದರು.

ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ಡೇಟಾಬೇಸ್ ರಚನೆಗಾಗಿ ಪೋರ್ಟಲ್ ಅನ್ನು ೨೦೨೧ ರಲ್ಲಿ ಪ್ರಾರಂಭಿಸಲಾಯಿತು. ಒಟ್ಟು ನೋಂದಾಯಿತ ಕಾರ್ಮಿಕರಲ್ಲಿ, ಶೇಕಡಾ ೫೩ ಕ್ಕಿಂತ ಹೆಚ್ಚು ಮಹಿಳೆಯರು ಇದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಇದುವರೆಗೆ, ವಿವಿಧ ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳ ೧೩ ಯೋಜನೆಗಳನ್ನು ಈಗಾಗಲೇ ಇ-ಶ್ರಮ್‌ನೊಂದಿಗೆ ಸಂಯೋಜಿಸಲಾಗಿದೆ. ಇದರಲ್ಲಿ ಪಿಎಂ-ಸ್ವನಿಧಿ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ, ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನಮಂತ್ರಿ ಆವಾಸ್ ಯೋಜನೆ ಮತ್ತು ಆಯುಷ್ಮಾನ್ ಭಾರತ್, ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ ಸೇರಿವೆ ಎಂದು ಶೋಭಾ ಕರಂದ್ಲಾಜೆ ವಿವರಿಸಿದರು.

*******************

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಇಂದು ಮತದಾರರ ಪಟ್ಟಿಯ ವಿಷಯದ ಬಗ್ಗೆ ಸದನದಲ್ಲಿ ಚರ್ಚೆಗೆ ಒತ್ತಾಯಿಸಿದರು.

ಮತದಾರರ ಪಟ್ಟಿಯ ಬಗ್ಗೆ ಹಲವಾರು ರಾಜಕೀಯ ಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿವೆ. ಲೋಕಸಭೆಯಲ್ಲಿ ಶೂನ್ಯವೇಳೆಯಲ್ಲಿ ಈ ವಿಷಯ ಪ್ರಸ್ತಾಪಿಸಿದ ರಾಹುಲ್ ಗಾಂಧಿ, ಇಡೀ ವಿರೋಧ ಪಕ್ಷವು ಮತದಾರರ ಪಟ್ಟಿ ಕುರಿತ ಚರ್ಚೆಗೆ ಒತ್ತಾಯಿಸುತ್ತಿದೆ ಎಂದು ಹೇಳಿದರು.

ಇದೇ ವೇಳೆ, ಟಿಎಂಸಿ ಸಂಸದ ಸೌಗತ ರಾಯ್, ನಕಲಿ ಮತದಾರರ ಗುರುತಿನ ಚೀಟಿ ವಿಷಯವನ್ನು ಪ್ರಸ್ತಾಪಿಸಿದರು.

*******************

ಕೇಂದ್ರದ ಜಲಜೀವನ್ ಮಿಷನ್‌ನಿಂದ ಶೇಕಡ ೮೦ಕ್ಕೂ ಹೆಚ್ಚು ಗ್ರಾಮೀಣ ಕುಟುಂಬಗಳು ನಲ್ಲಿ ನೀರಿನ ಸಂಪರ್ಕ ಸೌಲಭ್ಯ ಪಡೆಯುತ್ತಿವೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಹೇಳಿದ್ದಾರೆ.

ರಾಜ್ಯಸಭೆಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು ೨೦೧೯ರಲ್ಲಿ ಕೇವಲ ಶೇಕಡ ೧೬ ರಷ್ಟು ಗ್ರಾಮೀಣ ಕುಟುಂಬಗಳು ಮಾತ್ರ ನಲ್ಲಿ ನೀರಿನ ಸಂಪರ್ಕವನ್ನು ಹೊಂದಿದ್ದವು.

ವಿಶ್ವ ಆರೋಗ್ಯ ಸಂಸ್ಥೆಯ ಅಂದಾಜಿನ ಪ್ರಕಾರ, ನೀರಿನಿಂದ ಹರಡುವ ರೋಗಗಳಿಂದ ಸಂಭವಿಸುವ ನಾಲ್ಕು ಲಕ್ಷ ಸಾವುಗಳನ್ನು ತಡೆಗಟ್ಟುವಲ್ಲಿ ಈ ಯೋಜನೆ ಕೊಡುಗೆ ನೀಡಿದೆ ಎಂದು ಅವರು ಹೇಳಿದರು.

*******************

ಆರೋಗ್ಯಕರ ಬಲವಾದ ಮತ್ತು ಸಮೃದ್ಧ ಸಮಾಜ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ಆಧ್ಯಾತ್ಮಿಕ ಶಾಂತಿಯ ಅಗತ್ಯವಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದಾರೆ.

ಹರಿಯಾಣದ ಹಿಸಾರ್‌ನಲ್ಲಿ ನಡೆದ ಬ್ರಹ್ಮಕುಮಾರಿಸ್ ಸುವರ್ಣ ಮಹೋತ್ಸವ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು

*******************

ಭಾರತವು ೨೦೨೪-೨೫ರಲ್ಲಿ ಅಕ್ಕಿ, ಗೋಧಿ, ಜೋಳ, ನೆಲಗಡಲೆ ಮತ್ತು ಸೋಯಾಬಿನ್‌ಗಳ ದಾಖಲೆ ಉತ್ಪಾದನೆ ಮಾಡಿದೆ.

ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಇಂದು ಬಿಡುಗಡೆ ಮಾಡಿದ ವರದಿ ಪ್ರಕಾರ, ಈ ಅವಧಿಯಲ್ಲಿ ದೇಶದ ಮುಂಗಾರು ಆಹಾರ ಧಾನ್ಯ ಉತ್ಪಾದನೆಯು ೧೬೬೩.೯೧ ಲಕ್ಷ ಮೆಟ್ರಿಕ್ ಟನ್ ಎಂದು ಅಂದಾಜಿಸಲಾಗಿದೆ.

ಹಿಂಗಾರು ಆಹಾರ ಉತ್ಪಾದನೆಯು ೧ ಸಾವಿರದ ೬೪೫.೨೭ ಲಕ್ಷ ಮೆಟ್ರಿಕ್ ಟನ್ ಎಂದು ಅಂದಾಜಿಸಲಾಗಿದೆ.

ಮುಂಗಾರು ಅಕ್ಕಿ ಉತ್ಪಾದನೆಯು ೨೦೨೩-೨೪ರಲ್ಲಿ ೧ ಸಾವಿರದ ೧೩೨ ಲಕ್ಷ ಮೆಟ್ರಿಕ್ ಟನ್‌ಗೆ ಹೋಲಿಸಿದರೆ, ೨೦೨೪-೨೫ರಲ್ಲಿ ೧ ಸಾವಿರದ ೨೦೬ ಲಕ್ಷ ಮೆಟ್ರಿಕ್ ಟನ್ ಆಗಿದೆ.

ಹಿಂಗಾರು ಅಕ್ಕಿ ಉತ್ಪಾದನೆಯು ೧೫೭ ಲಕ್ಷ ಮೆಟ್ರಿಕ್ ಟನ್, ಗೋಧಿ ಉತ್ಪಾದನೆಯು ೧ ಸಾವಿರದ ೧೫೪ ಲಕ್ಷ ಮೆಟ್ರಿಕ್ ಟನ್ ಹಾಗೂ ಮುಂಗಾರು ಸಿರಿಧಾನ್ಯ ಉತ್ಪಾದನೆಯು ೧೩೭ ಲಕ್ಷ ಮೆಟ್ರಿಕ್ ಟನ್ ಮತ್ತು ಹಿಂಗಾರು ಸಿರಿಧಾನ್ಯ ಉತ್ಪಾದನೆಯು ೩೦.೮೧ ಲಕ್ಷ ಮೆಟ್ರಿಕ್ ಟನ್ ಎಂದು ಅಂದಾಜಿಸಲಾಗಿದೆ.

ತೋಗರಿ, ಕಡಲೆಕಾಳು ಉತ್ಪಾದನೆಯು ಕ್ರಮವಾಗಿ ೩೫ ಲಕ್ಷ ಮೆಟ್ರಿಕ್ ಟನ್ ಮತ್ತು ೧೧೫ ಲಕ್ಷ ಮೆಟ್ರಿಕ್ ಟನ್ ಎಂದು ಅಂದಾಜಿಸಲಾಗಿದೆ.

*******************

ಭಾರತ-ಕಾಂಬೋಡಿಯಾ ವಿದೇಶಾಂಗ ಸಚಿವಾಲಯಗಳ ಸಮಾಲೋಚನೆಯ ಮೂರನೇ ಸಭೆ ಇಂದು ಕಾಂಬೋಡಿಯಾದ ಸೀಮ್ ರೀಪ್‌ನಲ್ಲಿ ನಡೆಯಿತು.

ಸಭೆಯಲ್ಲಿ ರಾಜಕೀಯ ಸಹಕಾರ, ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ ಮತ್ತು ಭದ್ರತೆ, ಅಭಿವೃದ್ಧಿಗೆ ನೆರವು, ಪರಂಪರೆ ಸಂರಕ್ಷಣೆ ಸೇರಿದಂತೆ ದ್ವಿಪಕ್ಷೀಯ ಸಂಬಂಧಗಳ ಕುರಿತು ಚರ್ಚಿಸಲಾಯಿತು.

ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಬಹುಪಕ್ಷೀಯ ವಿಷಯಗಳ ಕುರಿತು ಎರಡೂ ಕಡೆಯವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಭಾರತೀಯ ನಿಯೋಗದ ನೇತೃತ್ವವನ್ನು ವಿದೇಶಾಂಗ ಕಾರ್ಯದರ್ಶಿ ಜೈದೀಪ್ ಮಜುಂದಾರ್ ವಹಿಸಿದ್ದರು. ಕಾಂಬೋಡಿಯಾ ನಿಯೋಗದ ನೇತೃತ್ವವನ್ನು ವಿದೇಶಾಂಗ ವ್ಯವಹಾರಗಳ ಮತ್ತು ಅಂತಾರಾಷ್ಟ್ರೀಯ ಸಹಕಾರ ಸಚಿವಾಲಯ ಕಾರ್ಯದರ್ಶಿ ಡಾ.ಎನ್.ಖೀಂಗ್ ವಹಿಸಿದ್ದರು.

ಭಾರತದ ಆಕ್ಟ್ ಈಸ್ಟ್ ನೀತಿ ಮತ್ತು ಇಂಡೋ-ಫೆಸಿಫಿಕ್ ದೃಷ್ಟಿಕೋನದಲ್ಲಿ ಕಾಂಬೋಡಿಯಾ ಪ್ರಮುಖ ಆಧಾರಸ್ತಂಭವಾಗಿದೆ. ಅಲ್ಲದೇ, ಜಾಗತಿಕ ದಕ್ಷಿಣದಲ್ಲಿ ಪ್ರಮುಖ ಪಾಲುದಾರ ದೇಶವಾಗಿದೆ.

*******************

ದೇಶಾದ್ಯಂತ ೫೪ನೇ ರಾಷ್ಟ್ರೀಯ ಸುರಕ್ಷತಾ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಪ್ರತಿ ವರ್ಷ ಮಾರ್ಚ್ ೪ ರಿಂದ ೧೦ ರವರೆಗೆ ವಿವಿಧ ಕ್ಷೇತ್ರಗಳಲ್ಲಿ ಸುರಕ್ಷತಾ ಮುನ್ನೆಚ್ಚರಿಕೆಗಳ ಕುರಿತು ಜಾಗೃತಿ ಮೂಡಿಸಲು ಈ ಸಪ್ತಾಹವನ್ನು ಆಚರಿಸಲಾಗುತ್ತಿದೆ.

'ವಿಕಸಿತ ಭಾರತಕ್ಕೆ ಸುರಕ್ಷತೆ ಮತ್ತು ಯೋಗಕ್ಷೇಮ ನಿರ್ಣಾಯಕ' ಎಂಬ ಧ್ಯೇಯವಾಕ್ಯದಡಿ ಈ ವರ್ಷದ ರಾಷ್ಟ್ರೀಯ ಸುರಕ್ಷತಾ ಸಪ್ತಾಹವನ್ನು ಆಚರಿಸಲಾಗುತ್ತಿದೆ.

ಇದು ಅಭಿವೃದ್ಧಿ ಹೊಂದಿದ ಭಾರತಕ್ಕೆ ಸುರಕ್ಷತೆಯ ಮಹತ್ವವನ್ನು ತಿಳಿಸಲು ಸಹಕಾರಿಯಾಗಿದೆ.

*******************

ಮುಂಬೈನ ಬ್ರಬಾರ್ನ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಗುಜರಾತ್ ಜೈಂಟ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಉಭಯ ತಂಡಗಳು ಈಗಾಗಲೇ ದೆಹಲಿ ತಂಡದೊಂದಿಗೆ ಪ್ಲೇಆಫ್ ಹಂತದಲ್ಲಿ ಸ್ಥಾನ ಖಚಿತಪಡಿಸಿಕೊಂಡಿವೆ. ಅಂಕಪಟ್ಟಿಯಲ್ಲಿ ಮೊದಲನೇ ಸ್ಥಾನಗಳಿಸುವ ತಂಡ ಫೈನಲ್‌ಗೆ ನೇರವಾಗಿ ಅರ್ಹತೆ ಪಡೆಯಲಿರುವ ಹಿನ್ನೆಲೆಯಲ್ಲಿ ಈ ಪಂದ್ಯ ಮಹತ್ವ ಪಡೆದಿದೆ.

ಗುಂಪು ಹಂತದ ಕೊನೆಯಲ್ಲಿ ಅಂಕಪಟ್ಟಿಯಲ್ಲಿ ೨ನೇ ಹಾಗೂ ೩ನೇ ಸ್ಥಾನ ಪಡೆಯುವ ತಂಡಗಳು ಎಲಿಮಿನೇಟರ್ ಪಂದ್ಯದಲ್ಲಿ ಮುಖಾಮುಖಿಯಾಗಲಿದ್ದು, ಈ ಪಂದ್ಯದಲ್ಲಿ ಗೆಲುವು ಸಾಧಿಸುವ ತಂಡ ಫೈನಲ್‌ಗೆ ಪ್ರವೇಶ ಪಡೆಯಲಿದೆ.

ಪ್ರಸ್ತುತ ದೆಹಲಿ ಕ್ಯಾಪಿಟಲ್ಸ್ ತಂಡ ೧೦ ಅಂಕಗಳೊಂದಿಗೆ ಮೊದಲನೇ ಸ್ಥಾನದಲ್ಲಿದೆ. ಗುಜರಾತ್ ಹಾಗೂ ಮುಂಬೈ ತಂಡಗಳು ತಲಾ ೮ ಅಂಕ ಪಡೆದಿದ್ದರೂ, ಉತ್ತಮ ನೆಟ್ ರನ್‌ರೇಟ್ ಕಾಯ್ದುಕೊಂಡಿರುವುದು ಗುಜರಾತ್ ೨ನೇ ಸ್ಥಾನದಲ್ಲಿದೆ.

ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಯುಪಿ ವಾರಿಯರ್ಸ್ ತಂಡಗಳು ಈಗಾಗಲೇ ಟೂರ್ನಿಯಿಂದ ಹೊರಬಿದ್ದಿದೆ.

******************

ಕೋಲ್ಕತ್ತಾದ ಕಿಶೋರ್ ಭಾರತಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಇಂಡಿಯನ್ ಸೂಪರ್ ಲೀಗ್ ಪಂದ್ಯದಲ್ಲಿಂದು ಪಂಜಾಬ್ ಫುಟ್ಬಾಲ್ ಕ್ಲಬ್ ಮತ್ತು ಮೊಹಮ್ಮದನ್ ಫುಟ್ಬಾಲ್ ಕ್ಲಬ್ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

******************

ಮುಂಬೈ ಷೇರುಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೨೧೭ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೪ ಸಾವಿರದ ೧೧೫ ಅಂಕಗಳು ದಾಖಲಾಗಿದೆ.

ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ ನಿಫ್ಟಿ ೯೨ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೪೬೦ ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೭ ರೂಪಾಯಿ ೩೩ ಪೈಸೆಯಷ್ಟಾಗಿದೆ.

********* ಮುಕ್ತಾಯ *********